ಕರ್ನಾಟಕ ವಿಧಾನ ಪರಿಷತ್ತು

01.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1959
02.	ಸದಸ್ಯರ ಹೆಸರು	:	ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
03.	ಉತ್ತರಿಸುವ ದಿನಾಂಕ	:	26.03.2020
04.	ಉತ್ತರಿಸುವ ಸಚಿವರು	:	ಮಾನ್ಯ ಗೃಹ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿನ ನ್ಯಾಯಾಲಯಗಳಲ್ಲಿ ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ಹುದ್ದೆಗಳು ಖಾಲಿ ಇರುವುದರಿಂದ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಬಂದಿದ್ದಲ್ಲಿ, ರಾಜ್ಯದಲ್ಲಿ ಒಟ್ಟು ಎಷ್ಟು ಪಬ್ಲಿಕ್ ಪ್ರಾಸಿಕ್ಯೂಟರ್ / ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ಹುದ್ದೆಗಳು ಮಂಜೂರಾಗಿವೆ; ಅವುಗಳಲ್ಲಿ ಎಷ್ಟು ಹುದ್ದೆಗಳು ಭರ್ತಿಯಾಗಿವೆ; ಖಾಲಿ ಇರುವ ಹುದ್ದೆಗಳು ಎಷ್ಟು; (ವಿವರ ನೀಡುವುದು)	ಅಭಿಯೋಗಗಳು ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಮಂಜೂರಾದ, ಭರ್ತಿಯಾದ ಮತ್ತು ಖಾಲಿ ಇರುವ ಪಬ್ಲಿಕ್ ಪ್ರಾಸಿಕ್ಯೂಟರ್/ ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ಹುದ್ದೆಗಳ ವಿವರ ಈ ಕೆಳಗಿನಂತಿದೆ.
ಇ)	ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ವಿಳಂಬವಾಗಲು ತೊಂದರೆಗಳೇನು;	

ಪದನಾಮ	ಮಂಜೂರಾದ ಹುದ್ದೆಗಳು	ಭರ್ತಿಯಾದ ಹುದ್ದೆಗಳು	ಖಾಲಿಯಿರುವ ಹುದ್ದೆಗಳು	ಷರಾ
ಪಬ್ಲಿಕ್ ಪ್ರಾಸಿಕ್ಯೂಟರ್/ ಕಾನೂನು ಅಧಿಕಾರಿ (ಹಿರಿಯ)	187	176	11	--
ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್	411	158	253	ಅ) ಈ ಪೈಕಿ 205 ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಈ ಹುದ್ದೆಗಳು ಭರ್ತಿಯಾಗುವವರೆಗೆ ಈ ಹುದ್ದೆಗಳಿಗೆ ಎದುರಾಗಿ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ. ಆ) ಇತ್ತೀಚೆಗೆ ತೆರವಾಗಿರುವ 48 ಹುದ್ದೆಗಳನ್ನು ಸಹ ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ.

ಈ)	ಖಾಲಿ ಇರುವ ಪಬ್ಲಿಕ್ ಪ್ರಾಸಿಕ್ಯೂಟರ್ /ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು? (ವಿವರ ಒದಗಿಸುವುದು)	ಪಬ್ಲಿಕ್ ಪ್ರಾಸಿಕ್ಯೂಟರ್ / ಕಾನೂನು ಅಧಿಕಾರಿ (ಹಿರಿಯ) ಹುದ್ದೆಗಳನ್ನು ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಮುಂಬಡ್ತಿ ಮೂಲಕ ಭರ್ತಿ ಮಾಡಲಾಗಿದೆ ಹಾಗೂ ಆಗಿಂದಾಗ್ಗೆ ಖಾಲಿಯಾಗುವ ಹುದ್ದೆಗಳನ್ನು ನಿಯಮಾನುಸಾರ ಮುಂಬಡ್ತಿ ಮೂಲಕ ಭರ್ತಿ ಮಾಡಲಾಗುವುದು. ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ವೃಂದದ ಹುದ್ದೆಗಳನ್ನು ವೃಂದ ಮತ್ತು ನೇಮಕಾತಿ ನಿಯಮಾನುಸಾರ ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಈ ಹುದ್ದೆಗಳು ಭರ್ತಿಯಾಗುವವರೆಗೆ ಈ ಹುದ್ದೆಗಳಿಗೆ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ.

ಒಇ 89 ಪಿಪಿಇ 2020 (ಇ)

(ಬಸವರಾಜ ಬೊಮ್ಮಾಯಿ)

ಗೃಹ ಸಚಿವರು